ನಿ-72-104

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ 72ರ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ**

ಪ್ರಶ್ನೆ : ಮಾಹಿತಿ ತಂತ್ರಜ್ಞಾನ ಕಾಯ್ದೆ ಪ್ರಕಾರ 2020 ರಲ್ಲಿ ದಾಖಲಾಗಿರುವ 842 ಆನ್‌ಲೈನ್ ಅಪರಾಧ ಕೇಸ್‌ಗಳ ಪೈಕಿ 738 ಕೇಸ್‌ಗಳು ಮಕ್ಕಳನ್ನು ಲೈಂಗಿಕ ಶೋಷಣೆ ಗುರಿಪಡಿಸುವಂತಾಗಿದ್ದು ಮಕ್ಕಳ ಮೇಲೆ ಸೈಬರ್ ಕ್ರೈಂನಲ್ಲಿ ದೇಶದಲ್ಲಿ ಕರ್ನಾಟಕವೇ ಎರಡನೇ ಸ್ಥಾನದಲ್ಲಿರುವ ಆತಂಕಕಾರಿ ವಿಷಯದ ಬಗ್ಗೆ.

ಉತ್ತರ: ರಾಜ್ಯದಲ್ಲಿ ಆನ್‌ಲೈನ್ ಮೂಲಕ ಮಕ್ಕಳ ಮೇಲಿನ ಲೈಂಗಿಕ ಶೋಷಣೆಯು ಹೆಚ್ಚಾಗದಂತೆ ಅನೇಕ ಕ್ರಮಗಳನ್ನು ಕೈಗೊಂಡಿದ್ದು, ಆರೋಪಿಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಬಂಧಿಸಲಾಗಿರುತ್ತದೆ. ಕಳೆದ 03 ವರ್ಷಗಳಲ್ಲಿ (2018, 2019, 2020, 2021– ನವೆಂಬರ್ ಅಂತ್ಯದವರೆಗೆ) ಮಕ್ಕಳ ಮೇಲಿನ ಆನ್‌ಲೈನ್ ಅಪರಾಧ ಪ್ರಕರಣಗಳು ಈ ಕೆಳಕಂಡಂತೆ ದಾಖಲಾಗಿರುತ್ತವೆ.

| ವರ್ಷ | ದಾಖಲಾದ ಪ್ರಕರಣ ಸಂಖ್ಯೆ | ಬಂಧಿಸಲಾಗಿರುವ ಆರೋಪಿಗಳ ಸಂಖ್ಯೆ |
|---|---|---|
| 2018 | 6 | 5 |
| 2019 | 11 | 21 |
| 2020 | 117 | 71 |
| 2021 (ನವೆಂಬರ್) | 117 | 94 |

- ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ Child Pornography ಗೆ ಸಂಬಂಧಿಸಿದಂತೆ ಎಸ್.ಓ.ಪಿ ಯನ್ನು ಸಿದ್ಧಪಡಿಸಿ ಎಲ್ಲಾ ಘಟಕಾಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ.
- ಸೈಬರ್ ಅಪರಾಧಗಳನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲು ಹಾಗೂ ಇಂತಹ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯದ ಪ್ರತಿ ಜಿಲ್ಲೆ ಹಾಗೂ ನಗರಗಳಲ್ಲಿ ವಿಶೇಷ ಸೈಬರ್, ನಾರ್ಕೋಟಿಕ್ ಎಕನಾಮಿಕ್ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಒಟ್ಟು 46 ಸೆನ್ ಪೊಲೀಸ್ ಠಾಣೆಗಳು ಹಾಗೂ ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ಮಾತ್ರ 9 ವಿಶೇಷ ಸೆನ್ ಪೊಲೀಸ್ ಠಾಣೆಗಳು ಪ್ರತಿ ವಿಭಾಗಕ್ಕೆ ಒಂದರಂತೆ ಕಾರ್ಯ ನಿರ್ವಹಿಸುತ್ತಿದೆ.
- ಆರೋಪಿಗಳನ್ನು ಪತ್ತೆ ಹಚ್ಚಲು ಅವರ ಮೊಬೈಲ್ ನಂಬರ್‌ಗಳ ಸಿ.ಡಿ.ಆರ್, ಎಸ್.ಡಿ.ಆರ್ ಮತ್ತು ಸಿ.ಎ.ಎಫ್ ಮಾಹಿತಿಗಳನ್ನು ಪಡೆಯಲಾಗುತ್ತದೆ.
- ಸೈಬರ್ ಮತ್ತು ಆರ್ಥಿಕ ಅಪರಾಧಗಳನ್ನು ನಿಯಂತ್ರಿಸಲು ಹಾಗೂ ಈ ನಿಟ್ಟಿನಲ್ಲಿ ದಾಖಲಾದ ಪ್ರಕರಣಗಳ ತನಿಖೆಯನ್ನು ಸಮರ್ಪಕವಾಗಿ ಹಾಗೂ ತ್ವರಿತವಾಗಿ ನಿರ್ವಹಿಸಲು ಸಿಐಡಿ ವಿಭಾಗದಲ್ಲಿಯೂ ಸಹ ಸೈಬರ್ ಪೊಲೀಸ್ ಠಾಣೆಯನ್ನು ಸ್ಥಾಪಿಸಲಾಗಿದೆ.

- ಸೈಬರ್ ಪೊಲೀಸ್ ಠಾಣೆಗಳನ್ನು ಉನ್ನತ ದರ್ಜೆಗೆ ಏರಿಸಿ, ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ವಿಶೇಷ ತರಬೇತಿಯನ್ನು (ADVANCE TECHNOLOGY TRAINING) ನೀಡಲಾಗಿದೆ.
- ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿ.ಐ.ಡಿ ಕಛೇರಿಯಲ್ಲಿ Centre for Cyber crime Investigation & Digital Forensic Training & Research ಘಟಕವನ್ನು ಪ್ರಾರಂಭಿಸಲಾಗಿದ್ದು, Data Security Council of India ರವರ ಸಹಯೋಗದೊಂದಿಗೆ ವಿಶೇಷ ಸೈಬರ್ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ. ಸಿಐಡಿ ಕಛೇರಿಯಲ್ಲಿ ಸಿ.ಎಫ್.ಯು (Cyber Forensic Unit) ವಿಭಾಗವನ್ನು ಹಿರಿಯ ಅಧಿಕಾರಿಗಳ ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಿ.ಎಫ್.ಯು ವಿಭಾಗದಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಪ್ರಕರಣಗಳನ್ನು ಭೇದಿಸಲಾಗುತ್ತಿದೆ.

**ಸಂಖ್ಯೆ: ಒಇ 46 ಎಸ್‌ಡಿಎನ್ 2021**

(ಅರಗ ಜ್ಞಾನೇಂದ್ರ)
ಗೃಹ ಸಚಿವರು